ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್. 25/2021 ದಿನಾಂಕ:04-11-2021

## ಅಧಿಸೂಚನೆ

**ಕರ್ನಾಟಕದಲ್ಲಿನ ಸ್ನಾತಕೋತ್ತರ ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶ – ದಾಖಲಾತಿ ಪರಿಶೀಲನೆ – 2021**

ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇವರ ಪತ್ರದ ಅನುಸಾರ, ಸರ್ಕಾರವು ತನ್ನ ದಿನಾಂಕ 29-10-2021 ರ ಪತ್ರದಲ್ಲಿ 2021ನೇ ಸಾಲಿಗೆ ಸ್ನಾತಕೋತ್ತರ ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕಾಗಿ ದಾಖಲಾತಿ ಪರಿಶೀಲನೆಯನ್ನು ನಡೆಸಲು ಪ್ರಾಧಿಕಾರಕ್ಕೆ ಅನುಮತಿಸಿರುತ್ತದೆ. ಆನ್‌ಲೈನ್ ಮೂಲಕ ಈಗಾಗಲೇ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಸ್ನಾತಕೋತ್ತರ ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕಾಗಿ ಎಲ್ಲಾ ಅಗತ್ಯ ಮೂಲ ದಾಖಲೆಗಳೊಂದಿಗೆ ದಾಖಲೆಗಳ ಪರಿಶೀಲನೆಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು ಇಲ್ಲಿ ಖುದ್ದಾಗಿ ಹಾಜರಾಗಲು ಸೂಚಿಸಿದೆ. SC/ST/OBC ಅರ್ಹತಾ ಮಾನದಂಡಗಳು ಕರ್ನಾಟಕ SC/ST/OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

ವಿವರವಾದ ಅರ್ಹತಾ ಮಾನದಂಡಗಳನ್ನೊಳಗೊಂಡ ಮಾಹಿತಿ ಪುಸ್ತಕ 2021 ಅನ್ನು ಪ್ರಾಧಿಕಾರದ ವೆಬ್‌ಸೈಟನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿರುತ್ತದೆ.

| ದಿನಾಂಕ | ಬೆಳಿಗ್ಗೆ 9.30 ರಿಂದ ಮ. 12.30 | ಮ. 1.30 ರಿಂದ ಸಂ. 4.30 ರ ವರೆಗೆ |
|---|---|---|
| | ಅಖಿಲ ಭಾರತ ರ್‍ಯಾಂಕ್ ಆಧಾರದ ಮೇಲೆ | |
| 09-11-2021 | 1 ರಿಂದ 4000 | 4001 ರಿಂದ 8000 |
| 10-11-2021 | 8001 ರಿಂದ 12000 | 12001 ರಿಂದ ಕೊನೆಯ ರ್‍ಯಾಂಕ್ |

NEET MDS 2021 ನಲ್ಲಿ ಅರ್ಹತೆಯನ್ನು ಪಡೆದ ಮಾತ್ರಕ್ಕೆ, ಅರ್ಹತಾ ಮಾನದಂಡಗಳನ್ನು ಪೂರೈಸದಿದ್ದಲ್ಲಿ / ನಿಗದಿತ ಪ್ರಮಾಣ ಪತ್ರಗಳನ್ನು ದಾಖಲಾತಿ ಪರಿಶೀಲನೆಗೆ ಒಳಪಡಿಸದಿದ್ದಲ್ಲಿ ಅಭ್ಯರ್ಥಿಯು ಪ್ರವೇಶಕ್ಕಾಗಿ ಯಾವುದೇ ಹಕ್ಕನ್ನು ಹೊಂದುವುದಿಲ್ಲ. ಮುಂದುವರಿದು, ನೊಂದಣಿ ಮಾಡಿಕೊಂಡು ದಾಖಲಾತಿ ಪರೀಶೀಲನೆಯನ್ನು ಯಶಸ್ವಿಯಾಗಿ ಪೂರೈಸುವ ಅಭ್ಯರ್ಥಿಗಳು ಮಾತ್ರ ಕರ್ನಾಟಕದಲ್ಲಿನ ಸರ್ಕಾರಿ / ಖಾಸಗಿ ಕಾಲೇಜುಗಳಲ್ಲಿ ಸ್ನಾತಕೋತ್ತರ ದಂತ ವೈದ್ಯಕೀಯ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರಾಗುತ್ತಾರೆ.

ನೊಂದಣಿ ಮಾಡದಿರುವ ಅಥವಾ ನೊಂದಣಿ ಮಾಡಿ ದಾಖಲಾತಿಗಳನ್ನು ಪರಿಶೀಲಿಸಿಕೊಳ್ಳದೆ ಇರುವ ಅಭ್ಯರ್ಥಿಗಳು ಪ್ರಾಧಿಕಾರದಿಂದಾಗಲೀ ಅಥವಾ ಕಾಲೇಜುಗಳಿಂದಾಗಲೀ ಸೀಟುಗಳನ್ನು ತೆಗೆದುಕೊಳ್ಳಲು ಅನುಮತಿಸಲಾಗುವುದಿಲ್ಲ, mop-up ಸುತ್ತಿನ ಸೀಟು ಹಂಚಿಕೆಯ ನಂತರ ಉಳಿಯಬಹುದಾದ ಸೀಟುಗಳನ್ನು ಆಯಾ ಕಾಲೇಜುಗಳಿಗೆ ವರ್ಗಾಯಿಸಲಾಗುತ್ತದೆ. ಈ ಸೀಟುಗಳನ್ನು ಭರ್ತಿ ಮಾಡಿಕೊಳ್ಳಲು, ಪ್ರಾಧಿಕಾರವು ಕಳುಹಿಸುವ ನೊಂದಣಿ ಮಾಡಿಕೊಂಡು ದಾಖಲಾತಿ ಪರಿಶೀಲನೆಯನ್ನು ಮಾಡಿಸಿದ ಆದರೆ ಯಾವುದೇ ಸೀಟುಗಳನ್ನು ಹಂಚಿಕೆ ಪಡೆಯದೇ ಇರುವ ಅಭ್ಯರ್ಥಿಗಳ ಪಟ್ಟಿಯ ಅನುಕ್ರಮದಂತೆ ಕಾಲೇಜುಗಳಲ್ಲಿ ಸೀಟುಗಳನ್ನು ಭರ್ತಿಮಾಡಿಕೊಳ್ಳಲಾಗುತ್ತದೆ. (ಭಾರತ ಸರ್ಕಾರದ ಸೂಚನೆಗಳ ಅನ್ವಯ)

ಇಚ್ಛೆ/ ಆಯ್ಕೆ ದಾಖಲಿಸುವ ಬಗ್ಗೆ, ಸೀಟು ಹಂಚಿಕೆ ಮತ್ತು ಪ್ರವೇಶಾತಿ ಪ್ರಕ್ರಿಯೆಯ ಬಗೆಗಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಅನ್ನು ನೋಡುತ್ತಿರಲು ಸೂಚಿಸಿದೆ.

ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in